ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-ADMIOEST(3)/17/2022 | 388

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 01.07.2022

**ಜ್ಞಾಪನ**

**ವಿಷಯ :** 2022-23ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು ಪಡೆದುಕೊಂಡಿರುವುದಕ್ಕೆ ಅನುಮೋದನೆ ಮತ್ತು ಭತ್ಯೆ ಮಂಜೂರಾತಿ ನೀಡುವ ಕುರಿತು.

**ಉಲ್ಲೇಖ:**
1. ಸರ್ಕಾರಿ ಆದೇಶ ಸಂಖ್ಯೆ: ಇಡಿ/16/ಟಿಪಿಇ/2017, ದಿನಾಂಕ: 11.12.2019.
2. ಸರ್ಕಾರದ ಪತ್ರ ಸಂಖ್ಯೆ: ಇಡಿ 174 ಡಿಟಿಇ 2020, ದಿನಾಂಕ: 22.12.2020
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: CPI/SATS/C1/ಕಛೇರಿ ಟಿಪ್ಪಣಿಗಳು/03/2022-23, ದಿನಾಂಕ: 09.05.2022
4. ಸರ್ಕಾರದ ಪತ್ರ ಸಂಖ್ಯೆ: ಇಡಿ 09 ಡಿಟಿಇ 2022(ಭಾಗ-1), ದಿನಾಂಕ: 04.06.2022
5. ಈ ಕಛೇರಿ ಸುತ್ತೋಲೆ ಸಂಖ್ಯೆ: DTE-ADMIOEST(3)/17/2022, ದಿನಾಂಕ: 08.06.2022
6. ಪ್ರಾಂಶುಪಾಲರಿಂದ ಸ್ವೀಕೃತವಾಗಿರುವ ಪ್ರಸ್ತಾವನೆಗಳು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ರ ಸರ್ಕಾರದ ಆದೇಶ ಮತ್ತು ಉಲ್ಲೇಖ(2) ರ ಪತ್ರದಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಗರಿಷ್ಠ ಮಾಸಿಕ ಕಾರ್ಯಭಾರ 36 ಗಂಟೆಗೆ ಗರಿಷ್ಠ ಮಾಸಿಕ ಗೌರವ ಧನ ರೂ. 12,500/- ಗಳನ್ನು ಮೀರದಂತೆ ನಿಗದಿಪಡಿಸಿ ಮಂಜೂರಾತಿ ನೀಡಲಾಗಿದೆ.

ಉಲ್ಲೇಖ(3) ರಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ 2022-23ನೇ ಸಾಲಿನ ಶೈಕ್ಷಣಿಕ ವರ್ಷ ದಿನಾಂಕ: 16.05.2022 ರಿಂದ ಆರಂಭಗೊಂಡಿರುತ್ತದೆ. ಉಲ್ಲೇಖ(4) ರ ಸರ್ಕಾರದ ಪತ್ರದಲ್ಲಿ, 2022-23ನೇ ಸಾಲಿಗೆ ಖಾಯಂ ಉಪನ್ಯಾಸಕರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ 2022-23ನೇ ಶೈಕ್ಷಣಿಕ ವರ್ಷದಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆದುರಾಗಿ ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು 2022-23ನೇ ಸಾಲಿನ ಅಂತ್ಯದವರೆಗೆ(ಮಾರ್ಚ್-2023) ಪಡೆಯಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ಉಲ್ಲೇಖ(5) ರಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ 2022-23 ನೇ ಶೈಕ್ಷಣಿಕ ಸಾಲಿಗೆ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಉಪನ್ಯಾಸಕರ ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ, ಸುತ್ತೋಲೆಯ ಅನುಬಂಧದಲ್ಲಿ ತಿಳಿಸಿರುವ ಕೆಳಕಂಡ ಕೋಷ್ಟಕದ ಕಾಲಂ(4) ರಲ್ಲಿ ತಿಳಿಸಿರುವ ಸಂಖ್ಯಾ ಮಾಹಿತಿಯ ಗರಿಷ್ಠ ಮಿತಿಯಲ್ಲಿ ಉಪಲಬ್ದ ಕಾರ್ಯಭಾರದ ಅವಶ್ಯಕತೆಗೆ ಅನುಗುಣವಾಗಿ ಸಿಮೀತಗೊಳಿಸಿ ಕೆಲವೊಂದು ಷರತ್ತು / ನಿಬಂಧನೆಗಳಿಗೊಳಪಟ್ಟು ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪ್ರಾಂಶುಪಾಲರ ಹಂತದಲ್ಲಿ ಪಡೆಯಲು ಅನುಮತಿ ನೀಡಲಾಗಿರುತ್ತದೆ. ಉಲ್ಲೇಖ(6) ರಂತೆ ಸಂಸ್ಥೆಗಳಲ್ಲಿ ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಿಕೊಂಡಿರುವುದಕ್ಕೆ ಅನುಮೋದನೆ ನೀಡಿ ಭತ್ಯೆ ಮಂಜೂರಾತಿ ನೀಡುವಂತೆ ಕೋರಲಾಗಿರುತ್ತದೆ.

...2/-

ಈ ಸಂಬಂಧ, 2022-23ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆದುಕೊಂಡಿರುವುದಕ್ಕೆ, 2022-23ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿಗೆ ಅನುಗುಣವಾಗಿ ಕಾರ್ಯನಿರ್ವಹಿಸಿದ ಅವಧಿಗೆ 2022-23ನೇ ಸಾಲಿನ ಆರ್ಥಿಕ ವರ್ಷದ ಅಂತ್ಯದವರೆಗೆ(ಮಾರ್ಚ್-2023) ಮಾತ್ರ ಕೆಳಕಂಡ ಕೋಷ್ಟಕದ ಕಾಲಂ(5) ರಲ್ಲಿ ತಿಳಿಸಿರುವ ಸಂಖ್ಯೆಯ ಮಿತಿಯೊಳಗೊಳಪಟ್ಟು ಅನುಮೋದನೆ ನೀಡಿ, ಸದರಿ ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು ಪಡೆದುಕೊಂಡಿರುವುದಕ್ಕೆ ಇಲಾಖೆಯ ಲೆಕ್ಕ ಶೀರ್ಷಿಕೆ 2203-00-105-0-01-324 ಅಡಿಯಲ್ಲಿ ಭತ್ಯೆಯನ್ನು ಭರಿಸಲು ಅನುಮತಿ ನೀಡಲಾಗಿದೆ.

| ಕ್ರ. ಸಂ. | ಸಂಸ್ಥೆಯ ಸಂಕೇತ | ಸಂಸ್ಥೆಯ ಹೆಸರು | ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆದುಕೊಳ್ಳಲು ಪ್ರಾಂಶುಪಾಲರಿಗೆ ಅನುಮತಿ ನೀಡಲಾದ ಸಂಖ್ಯೆ | ಪ್ರಾಂಶುಪಾಲರ ಹಂತದಲ್ಲಿ ಸೇವೆಯನ್ನು ಪಡೆದುಕೊಂಡಿರುವ ಅರೆಕಾಲಿಕ ಉಪನ್ಯಾಸಕರ ಸಂಖ್ಯೆ |
|---|---|---|---|---|
| (1) | (2) | (3) | (4) | (5) |
| 1 | 301 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಭಧ್ರಾವತಿ | 13 | 13 |
| 2 | 302 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ,ಮಂಗಳೂರು | 09 | 08 |
| 3 | 303 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಾಗಲಕೋಟೆ | 07 | 07 |
| 4 | 304 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಹುಬ್ಬಳ್ಳಿ | 07 | 07 |
| 5 | 305 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಕಲಬುರಗಿ | 04 | 04 |
| 6 | 306 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಳ್ಳಾರಿ | 06 | 06 |
| | | ಒಟ್ಟು ಸಂಖ್ಯೆ | **46** | **45** |

ಷರತ್ತುಗಳು:
1) ಅರೆಕಾಲಿಕ ಉಪನ್ಯಾಸಕರಿಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಹಾಜರಾತಿ ವಹಿಯನ್ನು ಹಾಗೂ ಬಯೋಮೆಟ್ರಿಕ್ ಹಾಜರಾತಿಯನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದು. ಅರೆಕಾಲಿಕ ಉಪನ್ಯಾಸಕರು ಕಾರ್ಯ ನಿರ್ವಹಿಸಿದ ಅವಧಿಗೆ ಸಂಬಂಧಿಸಿದ ಮೊತ್ತವನ್ನು ಪ್ರೋರಾಟ ಆಧಾರದ ಮೇರೆಗೆ ಅರೆಕಾಲಿಕ ಭತ್ಯೆ ನೀಡತಕ್ಕದು.
2) ಅರೆಕಾಲಿಕ ಉಪನ್ಯಾಸಕರ ನೇಮಕಾತಿಯು ತಾತ್ಕಾಲಿಕವಾಗಿರುತ್ತದೆಯೆಂದೂ, ಪೂರ್ಣಾವಧಿ ಉಪನ್ಯಾಸಕರುಗಳ ನೇಮಕಾತಿಯಾದ ಕೂಡಲೇ ಸದರಿಯವರ ನೇಮಕಾತಿಯನ್ನು ರದ್ದುಪಡಿಸಲಾಗುವುದೆಂದು ಅರೆಕಾಲಿಕ ಉಪನ್ಯಾಸಕರುಗಳಿಂದ ಮುಚ್ಚಳಿಕೆಯನ್ನು ಪಡೆಯತಕ್ಕದ್ದು.

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

**ಜಂಟಿ ನಿರ್ದೇಶಕರು(ಆಡಳಿತ),**
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ:-

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳಿಗೆ(ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ).

ಪ್ರತಿ:-

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ಸಹಾಯಕ ನಿರ್ದೇಶಕರು(ಯೋಜನೆ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
3. ಲೆಕ್ಕಾಧಿಕಾರಿ(ಬಿಲ್ಸ್), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
4. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
5. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.